ಬುಧವಾರ 28.01.2026
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 128
Digital Varthe Kannada Daily
Volume 01 - Issue 128
Wednesday , 28.01.2026
Price: 5/- Rs
2 Pages Bangalore

PRGI/RNI: KNKAN/25/A1348

ಡಿಜಿಟಲ್ ವಾರ್ತೆ
ಕನ್ನಡಿಗರ ಶಕ್ತಿ
ಕನ್ನಡ ದಿನಪತ್ರಿಕೆ

DIGITAL VARTHE
digitalvarthe@gmail.com
www.digitalvarthe.com

# ಹೆತ್ತ ತಾಯಿಯನ್ನೇ ಅಟ್ಟಾಡಿಸಿ ಕೊಂದ ರಕ್ಕಸ ಮಗ



**ರಾಯಚೂರು:** ರಕ್ಕಸ ಮಗನೋರ್ವ ಹೆತ್ತ ತಾಯಿಯನ್ನೇ ಅಟ್ಟಾಡಿಸಿ, ಆಕೆಯ ಮೇಲೆ ಕಲ್ಲು ಎತ್ತಿಹಾಕಿ ಬರ್ಬರವಾಗಿ ಕೊಲೆ ಮಾಡಿರುವ ಘಟನೆ ರಾಯಚೂರು ಜಿಲ್ಲೆ ಲಿಂಗಸುಗೂರು ತಾಲೂಕಿನ ಜಕ್ಕೇರು ತಾಂಡಾದಲ್ಲಿ ನಡೆದಿದೆ. ಚಂದವ್ವ (45) ಮೃತ ಮಹಿಳೆಯಾಗಿದ್ದು, ಆಕೆಯ ಮೊದಲ ಪುತ್ರ ಕುಮಾರನೇ ಆರೋಪಿಯಾಗಿದ್ದಾನೆ. ಘಟನೆ ಸಂಬಂಧ ಆರೋಪಿಯನ್ನು ಬಂಧಿಸಿರುವ ಪೊಲೀಸರು, ತನಿಖೆ ಮುಂದುವರಿಸಿದ್ದಾರೆ.

ಮಗನಿಂದಲೇ ಕೊಲೆಯಾದ ಚಂದವ್ವಗೆ ಒಟ್ಟು 6 ಜನ ಮಕ್ಕಳು. ಆ ಪೈಕಿ 4 ಜನ ಹೆಣ್ಣು ಮಕ್ಕಳು ಮತ್ತು ಓರ್ವ ಮಗನಿಗೆ ಮದುವೆಯಾಗಿದೆ. ಮತ್ತೋರ್ವ ಪುತ್ರ ಸಂತೋಷ್ ಎಂಬಾಂತ ಇದೇ ಜಕ್ಕೇರು ತಾಂಡಾದಲ್ಲಿ ಜೆಸಿಬಿ ಆಪರೇಟರ್ ಆಗಿದ್ದರೆ, ಮೊದಲ ಮಗ ಕುಮಾರ್ ಹೆಂಡತಿ ಮತ್ತು ಮಕ್ಕಳ ಜೊತೆ ಬೆಂಗಳೂರಲ್ಲಿ ನೆಲೆಸಿದ್ದ. ಆದರೆ ಈತ ಸ್ವಲ್ಪ ಕಿರಿಕ್ ಪಾರ್ಟಿಯಾಗಿದ್ದು, ಕುಡಿದು ಗಲಾಟೆ ಮಾಡೋದು ಈತನ ಕೆಟ್ಟ ಚಾಳಿಯಾಗಿ ಮಾರ್ಪಟ್ಟಿತ್ತು. ಈ ಮಧ್ಯೆ ಇತ್ತೀಚೆಗೆ ಬೆಂಗಳೂರಿನಿಂದ ಜಕ್ಕೇರು ತಾಂಡಾ ಗ್ರಾಮಕ್ಕೆ ಬಂದಿದ್ದ ಕುಮಾರ್, ತಾಯಿ ಚಂದವ್ವ ಜೊತೆ ಗಲಾಟೆ ಮಾಡಿದ್ದ. ನಿನ್ನೆ ಸಂಜೆ ತಾಯಿ ಜೊತೆ ವಾಗ್ವಾದವಾಗಿ ಆಕೆಯನ್ನ ಎಳೆದಾಡಿ ಹೊಡೆದಿದ್ದ. ಬಳಿಕ ತಾಯಿ ಕೂದಲು ಹಿಡಿದು ಎಳೆದೊಯ್ದು ಮನೆ ಪಕ್ಕದ ಸೇವಾಲಾಲ್ ಭವನದ ಕಟ್ಟಡದ ಬಳಿ ಬಿಸಾಡಿದ್ದ. ಈ ವೇಳೆ ತಲೆಗೆ ಗಂಭೀರ ಪೆಟ್ಟಾಗಿ ಚಂದವ್ವ ಕುಸಿದಿದ್ದು, ಆಕೆ ತಲೆ ಮೇಲೆ ಕಲ್ಲು ಎತ್ತಿ ಹಾಕಿ ಪಾಪಿ ಮಗ ಕುಮಾರ್ ಹತ್ಯೆಗೈದಿದ್ದಾನೆ.

ಇನ್ನು ಮಗ ಕುಮಾರ್, ತಾಯಿ ಚಂದವ್ವಳ ಹತ್ಯೆ ಮಾಡಲು ಕಾರಣ ಕೇಳಿದ್ರೆ ಕೋಪ ನೆತ್ತಿಗೇರತ್ತೆ. ದುಡಿದು ತಾಯಿ ಸಾಕಬೇಕಿದ್ದ ಮಗ ಕುಮಾರ್, 2 ಲಕ್ಷ ಹಣ ಕೊಡು ಎಂದು ಅಮ್ಮನನ್ನೇ ಪೀಡಿಸುತ್ತಿದ್ದ. ಆಕೆ ಕೊಡದೇ ಇದ್ದಾಗ ಮನೆ ಮಾಳಿಗೆಯ ಶೀಟ್ ಒಡೆದು ಹಾಕಿ ದೊಡ್ಡ ಗಲಾಟೆ ಮಾಡಿದ್ದ. ಜಮೀನು ಮಾರಿಯಾದರೂ ಹಣ ಕೊಡು ಎಂದು ಹೇಳಿದ್ದ ಆತ, ನಿನ್ನೆವರೆಗೆ ಆಕೆಗೆ ಡೆಡ್ ಲೈನ್ ಕೂಡ ಕೊಟ್ಟಿದ್ದ. ಆದ್ರೆ ನಿನ್ನೆ ತಾಯಿ ಚಂದವ್ವ, ನಿನ್ನ ತಮ್ಮ ಸಂತೋಷ್ ಮದುವೆ ಮಾಡಬೇಕಿದೆ. ಅದಕ್ಕೇ ಹಣ ಇಲ್ಲ, ನಿಂಗೆಲ್ಲಿ ಕೊಡಲಿ ಎಂದು ಬುದ್ದಿವಾದ ಹೇಳಿದ್ದಳು. ಇದೇ ವಿಚಾರಕ್ಕೆ ಕೆರಳಿದ ಪಾಪಿ ಕುಮಾರ್, ತಾಯಿಯನ್ನ ಎಳೆದಾಡಿ ಅಟ್ಟಾಡಿಸಿ ರಸ್ತೆಯಲ್ಲೇ ಹೊಡೆದಿದ್ದಾನೆ. ಈ ವೇಳೆ ಬಿಡಿಸಲು ಹೋದ ಸ್ಥಳೀಯರ ಬಳಿ ನಿಮ್ಮನ್ನೂ ಮುಗಿಸ್ತಿನಿ ಅಂತ ಕಿರುಚಾಡಿದ್ದ ಎನ್ನಲಾಗಿದೆ. ಘಟನೆ ಬೆನ್ನಲ್ಲೇ ಮುದಗಲ್ ಪೊಲೀಸರು ಆರೋಪಿ ಕುಮಾರ್‌ನನ್ನು ಬಂಧಿಸಿ ಜೈಲಿಗಟ್ಟಿದ್ದಾರೆ. ಹೆತ್ತ ತಾಯಿಯನ್ನೇ ಕೊಲೆಗೈದಿರೊ ಆರೋಪಿಗೆ ತಕ್ಕ ಶಿಕ್ಷೆ ಆಗಬೇಕು ಎಂದು ಕುಟುಂಬಸ್ಥರು ಕಣ್ಣೀರು ಹಾಕಿ ಆಗ್ರಹಿಸಿದ್ದಾರೆ.

# ಗಂಡನ ಅನುಮಾನದ ಭೂತಕ್ಕೆ ಬಲಿಯಾದ ಹೆಂಡ್ತಿ



**ಚಿತ್ರದುರ್ಗ:** ಆ ಕುಟುಂಬಕ್ಕೆ ಪತ್ನಿಯೇ ಆಧಾರ ಸ್ತಂಭವಾಗಿದ್ದರು. ಕ್ಯಾನ್ಸರ್ ಪೀಡಿತ ಪತಿಯ ಆರೈಕೆ ಜತೆಗೆ ಮನೆಯ ಜವಾಬ್ದಾರಿ ಕೂಡ ಹೊತ್ತಿದ್ದರು. ಆದರೆ ಪತಿಯ ತಲೆಗೆ ಹೊಕ್ಕ ಅನುಮಾನದ ಶಂಕೆಯೊಂದು ಪತ್ನಿಯ ಕೊಲೆ (murder) ಮಾಡಿಸಿದೆ. ಕೋಲಿನಿಂದ ತಲೆಗೆ ಹೊಡೆದು ಪತಿ (Husband) ರವಿಕುಮಾರ್ ಪತ್ನಿ ಮಮತಾ(45)ರನ್ನು ಹತ್ಯೆಗೈದಿದ್ದಾರೆ. ಚಿಕ್ಕಜಾಜೂರು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

**ನಡೆದದ್ದೇನು?:** ಚಿತ್ರದುರ್ಗ ಜಿಲ್ಲೆಯ ಹೊಳಲ್ಕೆರೆ ತಾಲೂಕಿನ ಹಿರೇ ಎಮ್ಮಿಗನೂರು ಗ್ರಾಮ ಇಂದು ಬೆಳ್ಳಂಬೆಳಗ್ಗೆ ಬೆಚ್ಚಿ ಬಿದ್ದಿತ್ತು. ಬೆಳಗ್ಗೆ 6:30ರ ಸುಮಾರಿಗೆ ಮಮತಾ(45) ಹೆಣವಾಗಿದ್ದರು. ಮನೆಯಲ್ಲಿ ಯಾವುದೇ ಫೈಲ್ ಹುಡುಕುವ ವೇಳೆ ಏಣಿಯಿಂದ ಬಿದ್ದು ತಲೆಗೆ ಪೆಟ್ಟಾಗಿ, ರಕ್ತಸ್ರಾವದಿಂದ ಸಿರುಚೆಲ್ಲಿದ್ದಾರೆ ಎಂದು ಪತಿ ಕಥೆ ಕಟ್ಟಿದ್ದ.

ಮನೆಯ ಜವಾಬ್ದಾರಿ ಹೊತ್ತಿದ್ದ ಮಮತಾ ಕ್ಯಾನ್ಸರ್ ಪೀಡಿತ ಪತಿ ರವಿಕುಮಾರ್ (52)ನನ್ನು ಆರೈಕೆ ಮಾಡುತ್ತಿದ್ದರು. ಹೀಗಾಗಿ ಗ್ರಾಮಸ್ಥರು ಸಹ ಸಹಜವಾಗಿಯೇ ನಂಬಿದ್ದರು. ಜೊತೆಗೆ ಅನ್ಯೋನ್ಯವಾಗಿದ್ದ ದಂಪತಿ ಗಲಾಟೆ ಮಾಡಿದ್ದು, ಯಾರೂ ಕಂಡಿರಲಿಲ್ಲ. ಆದರೆ ಪೊಲೀಸರು ಸ್ಥಳಕ್ಕೆ ಬಂದು ತನಿಖೆ ನಡೆಸಿದಾಗ ಅಸಲಿಯತ್ತು ಬಯಲಾಗಿತ್ತು.

**ಅಕ್ರಮ ಸಂಬಂಧ ಹಿನ್ನೆಲೆ ಹತ್ಯೆ:** ಚಿತ್ರದುರ್ಗ ಎಸ್‌ಪಿ ರಂಜಿತ್ ಕುಮಾರ್ ಬಂಡಾರು, ಡಿವೈಎಸ್‌ಪಿ ಪಿ. ದಿನಕರ್ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ಮಾಡಿದ್ದಾರೆ. ಚಿಕ್ಕಜಾಜೂರು ಠಾಣೆ ಪೊಲೀಸರು ಆರೋಪಿ ರವಿಕುಮಾರ್ ನನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದ್ದಾರೆ. ಮನೆಯ ಖರ್ಚು, ವೆಚ್ಚ, ಸಾಲ-ಸೋಲ ಮತ್ತು ಆಸ್ತಿ ಮಾರಾಟದ ಬಗ್ಗೆ ಪತಿ-ಪತ್ನಿ ನಡುವೆ ವಾಗ್ವಾದ ನಡೆದಿತ್ತು. ಅದೇ ಕಾರಣಕ್ಕೆ ಮನೆಯಲ್ಲಿದ್ದ ಕೋಲಿನಿಂದ ತಲೆಗೆ ಹೊಡೆದು ಹತ್ಯೆ ಮಾಡಿರುವುದಾಗಿ ಆರೋಪ ಕೇಳಿ ಬರುತ್ತಿದೆ. ಆದರೆ ಆರೋಪಿ ರವಿ ಮಾತ್ರ ಪತ್ನಿಗೆ ಅಕ್ರಮ ಸಂಬಂಧ ಇತ್ತು. ಹೀಗಾಗಿ, ಕೊಲೆ ಮಾಡಿದ್ದೇನೆಂದು ಪೊಲೀಸರೆದುರು ಒಪ್ಪಿಕೊಂಡಿರುವುದು ತಿಳಿದು ಬಂದಿದೆ.

ಒಟ್ಟಾರೆಯಾಗಿ ಕೋಟೆನಾಡು ಚಿತ್ರದುರ್ಗದ ಹಿರೇ ಎಮ್ಮಿಗನೂರು ಗ್ರಾಮದಲ್ಲಿ ಪತಿಯೇ ಪತ್ನಿಯನ್ನು ಕೊಂದು ಹಾಕಿದ ದಾರುಣ ಘಟನೆ ನಡೆದಿದೆ. ಚಿಕ್ಕಜಾಜೂರು ಪೊಲೀಸ್ ಠಾಣೆಯಲ್ಲಿ ಈ ಬಗ್ಗೆ ಪ್ರಕರಣ ದಾಖಲಾಗಿದೆ. ಪೊಲೀಸರು ಸಂಪೂರ್ಣ ತನಿಖೆ ನಡೆಸಿ ಅಸಲಿಗೆ ಕೊಲೆಗೆ ಕಾರಣವೇನು ಎಂಬುದು ಪತ್ತೆ ಹಚ್ಚಬೇಕಿದೆ.

# ಮದುವೆಯಾದ 45 ದಿನಕ್ಕೆ ಲವರ್ ಜೊತೆ ಯುವತಿ ಎಸ್ಕೇಪ್: ಪತಿ, ಸೋದರ ಮಾವ ಸೂಸೈಡ್



**ದಾವಣಗೆರೆ:** ಮದುವೆಯಾಗಿ ಕೇವಲ 45 ದಿನಗಳಷ್ಟೇ ಕಳೆದಿರುವಾಗ ನವವಿವಾಹಿತ ಯುವಕನೊಬ್ಬ ಆತ್ಮಹತ್ಯೆಗೆ ಶರಣಾಗಿರುವ ಆಘಾತಕಾರಿ ಘಟನೆ ದಾವಣಗೆರೆ ತಾಲೂಕಿನ ಗುಮ್ಮನೂರಿನಲ್ಲಿ ನಡೆದಿದೆ. ಮೃತನನ್ನು ಹರೀಶ್ (30) ಎಂದು ಗುರುತಿಸಲಾಗಿದೆ. ಪತ್ನಿಯ ವರ್ತನೆಯಿಂದ ಮನಸ್ಸಿಗೆ ತೀವ್ರ ನೋವುಂಟಾಗಿದ್ದು, ತನ್ನ ಸಾವಿಗೆ ಅದೇ ಕಾರಣ ಎಂದು ಉಲ್ಲೇಖಿಸಿ ಹರೀಶ್ ಎರಡು ಪುಟಗಳ ಡೆತ್‌ನೋಟ್ ಬರೆದಿಟ್ಟು ಮನೆಯಲ್ಲಿ ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ದುರಂತ ಅಷ್ಟಕ್ಕೆ ಸೀಮಿತವಾಗದೆ, ಹರೀಶ್ ಸಾವಿನ ಆಘಾತದಿಂದಾಗಿ ಮುಂದೆ ನಿಂತು ಇವರ ಮದುವೆ ಮಾಡಿಸಿದ್ದ ಯುವತಿಯ ಸೋದರ ಮಾವ ರುದ್ರೇಶ್ ಕೂಡ ಆತ್ಮಹತ್ಯೆಗೆ ಶರಣಾಗಿರುವುದು ಈ ಪ್ರಕರಣವನ್ನು ಮತ್ತಷ್ಟು ಹೃದಯವಿದ್ರಾವಕವಾಗಿಸಿದೆ.

**ಡೆತ್‌ನೋಟ್‌ನಲ್ಲಿ ಹರೀಶ್ ಉಲ್ಲೇಖಿಸಿದ ಆರೋಪಗಳು:** ಹರೀಶ್ ಬರೆದಿಟ್ಟಿರುವ ಡೆತ್‌ನೋಟ್‌ನಲ್ಲಿ ಪತ್ನಿಯಿಂದ ತನಗೆ ನಿರಂತರ ಮಾನಸಿಕ ಕಿರುಕುಳ ನೀಡಲಾಗುತ್ತಿತ್ತು ಎಂದು ಆರೋಪಿಸಿದ್ದಾರೆ. ಪತ್ನಿ ಅನಗತ್ಯವಾಗಿ ಜಗಳಕ್ಕೆ ಇಳಿದು, ಬೇರೆ ಯುವಕನೊಂದಿಗೆ ಓಡಿ ಹೋಗಿ ನಂತರ ನಾನು ಹಿಂಸೆ ನೀಡುತ್ತಿದ್ದೇನೆ ಎಂದು ಸುಳ್ಳು ಆರೋಪ ಮಾಡಿದ್ದಾಳೆ ಎಂದು ಡೆತ್‌ನೋಟ್‌ನಲ್ಲಿ ಉಲ್ಲೇಖಿಸಲಾಗಿದೆ. ಪತ್ನಿ ಹಾಗೂ ಆಕೆಯ ಸಂಬಂಧಿಕರಿಂದ ಜೀವ ಬೆದರಿಕೆ ಕೂಡ ಎದುರಿಸಬೇಕಾಯಿತು ಎಂದು ಹರೀಶ್ ಆರೋಪಿಸಿದ್ದಾರೆ.

ಈ ಎಲ್ಲಾ ಕಾರಣಗಳಿಂದ ಮನಸ್ಸಿಗೆ ತೀವ್ರ ಬೇಸರ ಉಂಟಾಗಿ ಆತ್ಮಹತ್ಯೆ ಮಾಡಿಕೊಳ್ಳುವ ನಿರ್ಧಾರಕ್ಕೆ ಬಂದಿರುವುದಾಗಿ ಹರೀಶ್ ಡೆತ್‌ನೋಟ್‌ನಲ್ಲಿ ಬರೆದಿದ್ದಾರೆ. ಪತ್ನಿ, ಆಕೆಯ ತಂದೆ, ತಾಯಿ ಹಾಗೂ ಚಿಕ್ಕಪ್ಪರಿಗೆ ಕಠಿಣ ಶಿಕ್ಷೆ ಆಗಬೇಕು ಎಂದು ಮನವಿ ಮಾಡಿರುವ ಹರೀಶ್, ಆಸ್ತಿಗಿಂತ ಮಾನ ಮುಖ್ಯ ಎಂಬ ಕಾರಣಕ್ಕೆ ಈ ನಿರ್ಧಾರ ಕೈಗೊಂಡಿದ್ದೇನೆ ಎಂದು ಹೇಳಿದ್ದಾರೆ.

ಡೆತ್‌ನೋಟ್‌ನಲ್ಲಿ ಕುಟುಂಬ ಸದಸ್ಯರಿಗೆ ಕ್ಷಮೆಯನ್ನೂ ಕೇಳಿರುವ ಹರೀಶ್, ಪತ್ನಿಯ ಕಡೆಯವರು ನೀಡಿದ ಹಿಂಸೆಯಿಂದಾಗಿ ತನ್ನ ತಂದೆ-ತಾಯಿ ಮನೆ ಬಿಟ್ಟು ಹೋಗುವ ಯೋಚನೆಗೂ ಬಂದಿದ್ದರು ಎಂದು ಆರೋಪಿಸಿದ್ದಾರೆ.

**ಪೊಲೀಸ್ ತನಿಖೆ:** ಘಟನೆಯ ಮಾಹಿತಿ ತಿಳಿಯುತ್ತಿದ್ದಂತೆ ದಾವಣಗೆರೆ ಗ್ರಾಮಾಂತರ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಡೆತ್‌ನೋಟ್ ವಶಕ್ಕೆ ಪಡೆದು ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು, ಎಲ್ಲ ಆಯಾಮಗಳಿಂದ ತನಿಖೆ ಮುಂದುವರಿಸಿದ್ದಾರೆ.



**ಮದುವೆ ಮಾಡಿಸಿದ ಸಂಬಂಧಿಯ ಆತ್ಮಹತ್ಯೆ:** ಇತ್ತ ಹರೀಶ್ ಆತ್ಮಹತ್ಯೆ ಮಾಡಿಕೊಂಡ ವಿಚಾರ ತಿಳಿಯುತ್ತಿದ್ದಂತೆ, ಇವರ ಮದುವೆಗೆ ಪ್ರಮುಖ ಪಾತ್ರವಹಿಸಿದ್ದ ಯುವತಿಯ ಸೋದರ ಮಾವ ರುದ್ರೇಶ್ ಕೂಡ ತೀವ್ರ ಮಾನಸಿಕ ಒತ್ತಡಕ್ಕೆ ಒಳಗಾಗಿ ಆತ್ಮಹತ್ಯೆಗೆ ಶರಣಾಗಿದ್ದಾರೆ. ರುದ್ರೇಶ್ ದಾವಣಗೆರೆಯ ಅನೆಕೊಂಡ ನಿವಾಸಿಯಾಗಿದ್ದು, ಈ ಘಟನೆ ಆತನಿಗೆ ಭಾರೀ ಅವಮಾನ ಹಾಗೂ ಮನೋವ್ಯಥೆ ತಂದಿದೆ ಎಂದು ಹೇಳಲಾಗಿದೆ.

ಪೊಲೀಸರ ಮಾಹಿತಿ ಪ್ರಕಾರ, ನಾಲ್ಕು ದಿನಗಳ ಹಿಂದೆ ಹರೀಶ್ ಪತ್ನಿ ಕುಮಾರ್ ಎಂಬ ಯುವಕನೊಂದಿಗೆ ಮನೆ ಬಿಟ್ಟು ಓಡಿಹೋಗಿದ್ದಳು ಎನ್ನಲಾಗಿದೆ. ಈ ವಿಷಯ ಸಮಾಜದಲ್ಲಿ ತಿಳಿದ ಹಿನ್ನೆಲೆಯಲ್ಲಿ ತೀವ್ರ ಅವಮಾನ ತಾಳಲಾರದೆ ರುದ್ರೇಶ್ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂಬ ಶಂಕೆ ವ್ಯಕ್ತವಾಗಿದೆ.

**ಸಂಬಂಧಿಕರ ಆರೋಪ:** ಈ ಘಟನೆಗೆ ಸಂಬಂಧಿಸಿದಂತೆ ಮಾತನಾಡಿರುವ ಮೃತರ ಕುಟುಂಬಸ್ಥರು, ಯುವತಿಯ ವರ್ತನೆ ಹಾಗೂ ನಿರ್ಧಾರಗಳೇ ಇಬ್ಬರ ಪ್ರಾಣಕ್ಕೆ ಕಾರಣವಾಗಿವೆ ಎಂದು ಆರೋಪಿಸಿದ್ದಾರೆ. ಒಟ್ಟಾರೆ ಒಂದು ಕುಟುಂಬದ ಒಳಜಗಳ ಮತ್ತು ವೈವಾಹಿಕ ಕಲಹ ಇಬ್ಬರ ಜೀವವನ್ನೇ ಕಿತ್ತುಕೊಂಡಿರುವ ದುರ್ಘಟನೆ ಇದಾಗಿದೆ.

ಈ ಜೋಡಿ ಆತ್ಮಹತ್ಯೆಗಳ ಕುರಿತು ಪೊಲೀಸರು ತನಿಖೆ ಮುಂದುವರಿಸಿದ್ದು, ಪ್ರಕರಣಕ್ಕೆ ಸಂಬಂಧಿಸಿದ ಎಲ್ಲ ಅಂಶಗಳನ್ನು ಪರಿಶೀಲಿಸಲಾಗುತ್ತಿದೆ.

# ಮಹಾರಾಷ್ಟ್ರ ನೋಂದಣಿಯ ಕಾರಲ್ಲಿ 30 ಲಕ್ಷ ರೂ. ಪತ್ತೆ!



**ಅಮರಾವತಿ:** ಆಂಧ್ರಪ್ರದೇಶದ ಶ್ರೀಶೈಲಂ ದೇವ ಸ್ಥಾನದ ಬಳಿ ಭದ್ರತಾ ತಪಾಸಣೆ ವೇಳೆ ಮಹಾರಾಷ್ಟ್ರ ನೋಂದಣಿಯ ಕಿಯಾ ಕಾರಿನಲ್ಲಿ 30 ಲಕ್ಷ ರೂ. ಹಣ ಪತ್ತೆಯಾಗಿದೆ.

ಮಹಾ ಶಿವರಾತ್ರಿ ಬ್ರಹ್ಮೋತ್ಸವದ ಸಿದ್ಧತೆಗಾಗಿ ಶ್ರೀಶೈಲಂಗೆ ಹೆಚ್ಚಿನ ಸಂಖ್ಯೆಯಲ್ಲಿ ಯಾತ್ರಿಕರು ಬರುತ್ತಿದ್ದಾರೆ. ಇದರಿಂದ ಭದ್ರತಾ ದೃಷ್ಟಿಯಿಂದ ವಾಹನ ತಪಾಸಣೆ ಹೆಚ್ಚಿಸಲಾಗಿದೆ. ಹೀಗೆ ತಪಾಸಣೆ ನಡೆಸುವಾಗ ಮುಖ್ಯ ಭದ್ರತಾ ಅಧಿಕಾರಿ ಶ್ರೀನಿವಾಸ ರಾವ್ ಮತ್ತು ಅವರ ತಂಡವು ಕಾರನ್ನು ತಡೆದು ತಪಾಸಣೆ ನಡೆಸಿತು. ಈ ವೇಳೆ ಭದ್ರತಾ ಸಿಬ್ಬಂದಿಗೆ ಹಣ ತುಂಬಿದ್ದ ಚೀಲ ಸಿಕ್ಕಿದೆ. ಹಣದ ಬಗ್ಗೆ ಪ್ರಶ್ನಿಸಿದಾಗ ಚಾಲಕ ಮತ್ತು ಪ್ರಯಾಣಿಕರು ತಮ್ಮದು ಚಿನ್ನದ ವ್ಯವಹಾರ ಇದೆ. ದೇವರ ದರ್ಶನಕ್ಕಾಗಿ ಶ್ರೀಶೈಲಂಗೆ ಬಂದಿದ್ದೇವೆ ಎಂದು ಹೇಳಿಕೊಂಡಿದ್ದಾರೆ. ಆದರೆ ಹಣದ ಮೂಲದ ಬಗ್ಗೆ ದಾಖಲೆ ಹಾಗೂ ವಿವರಣೆ ನೀಡಲು ಅವರು ವಿಫಲರಾಗಿದ್ದಾರೆ.

ಈ ಬಗ್ಗೆ ಭದ್ರತಾ ಸಿಬ್ಬಂದಿ ಶ್ರೀಶೈಲಂ ಪಟ್ಟಣ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಪೊಲೀಸರು ಕಾರು ಹಾಗೂ ಹಣವನ್ನು ವಶಪಡಿಸಿಕೊಂಡಿದ್ದಾರೆ. ಹಣದ ಮೂಲ ಹಾಗೂ ಸಂಬಂಧಪಟ್ಟ ಅಧಿಕಾರಿಗಳಿಗೆ ಮಾಹಿತಿ ನೀಡದೇ ಇಷ್ಟೊಂದು ಪ್ರಮಾಣದ ಹಣ ಸಾಗಿಸಲಾಗಿದೆ. ಇದರಲ್ಲಿ ಅಕ್ರಮ ಹಣ ವರ್ಗಾವಣೆ ಕಾಯ್ದೆ, ಆದಾಯ ತೆರಿಗೆ ನಿಯಮಗಳು ಅಥವಾ ಇತರೆ ಕಾನೂನು ಉಲ್ಲಂಘನೆಯಾಗಿದೆಯೇ ಎಂಬ ಬಗ್ಗೆ ಪೊಲೀಸರು ತನಿಖೆ ನಡೆಸುತ್ತಿದ್ದಾರೆ.

ಶ್ರೀಶೈಲಂ ದೇವಾಲಯಕ್ಕೆ ವರ್ಷವಿಡೀ ಪ್ರವಾಸಿಗರು ಬರುತ್ತಿರುತ್ತಾರೆ. ಅದರಲ್ಲೂ ವಿಶೇಷವಾಗಿ ಮಹಾ ಶಿವರಾತ್ರಿ ಸಮೀಪಿಸುತ್ತಿದ್ದಂತೆ ಹೆಚ್ಚಿನ ಪ್ರಮಾಣದ ಬರುತ್ತಾರೆ. ಜನರ ಸುರಕ್ಷತೆಗಾಗಿ ಹಾಗೂ ಕಾನೂನುಬಾಹಿರ ಚಟುವಟಿಕೆಗಳನ್ನು ತಡೆಯಲು ಟೋಲ್ ಗೇಟ್‌ಗಳು, ಪ್ರವೇಶ ದ್ವಾರಗಳಲ್ಲಿ ಭದ್ರತಾ ತಪಾಸಣೆಗಳನ್ನು ಇತ್ತೀಚೆಗೆ ಹೆಚ್ಚಿಸಲಾಗಿದೆ.

# ಗಣರಾಜ್ಯೋತ್ಸವ ದಿನ ಪುರುಷರ ಗೌರವ-ನ್ಯಾಯ ರಕ್ಷಣೆಗೆ ಮಹತ್ವದ ನಿರ್ಧಾರ




**ಗಣರಾಜ್ಯೋತ್ಸವದ ಅಂಗವಾಗಿ ನಡೆದ ಕರ್ನಾಟಕ ರಾಜ್ಯ ಪುರುಷರ ಕಲ್ಯಾಣ ಮತ್ತು ರಕ್ಷಣಾ ಸಮಿತಿಯ ಮೊದಲ ಸಭೆಯಲ್ಲಿ ಪದಾಧಿಕಾರಿಗಳು ಹಾಗೂ ಅತಿಥಿಗಳು**

**ಬೆಂಗಳೂರು:** ಗಣರಾಜ್ಯೋತ್ಸವದ ಅಂಗವಾಗಿ ಕರ್ನಾಟಕ ರಾಜ್ಯದಲ್ಲಿ ಪುರುಷರ ಹಕ್ಕುಗಳು, ಕಲ್ಯಾಣ ಹಾಗೂ ಕಾನೂನು ರಕ್ಷಣೆಗೆ ವೇದಿಕೆ ಒದಗಿಸುವ ಉದ್ದೇಶದಿಂದ ಸ್ಥಾಪನೆಯಾಗಿರುವ ಕರ್ನಾಟಕ ರಾಜ್ಯ ಪುರುಷರ ಕಲ್ಯಾಣ ಮತ್ತು ರಕ್ಷಣಾ ಸಮಿತಿಯ ಮೊದಲ ಸಭೆ ಯಶಸ್ವಿಯಾಗಿ ನಡೆಯಿತು.

ಸಭೆಯ ಅಧ್ಯಕ್ಷತೆಯನ್ನು ಗೌರವ ಅಧ್ಯಕ್ಷರಾದ ಮ. ನಿ. ಪ್ರ. ಶರಣ ಬಸವ ಶ್ರೀ ಸಂಘಮೇಶ್ ನಾಥ್ ವಹಿಸಿ ಮಾತನಾಡಿದರು. ಸಮಿತಿಯ ಉದ್ದೇಶಗಳು, ಮುಂದಿನ ಕಾರ್ಯಯೋಜನೆ ಹಾಗೂ ಸಂಘಟನಾತ್ಮಕ ಬಲವರ್ಧನೆ ಕುರಿತು ವಿಸ್ತೃತ ಚರ್ಚೆ ನಡೆಸಿದ ಅವರು, ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಘಟಕಗಳನ್ನು ರಚಿಸುವುದು ಹಾಗೂ ಪುರುಷರಿಗೆ ಸಂಬಂಧಿಸಿದ ಸಾಮಾಜಿಕ ಮತ್ತು ಕಾನೂನು ಸಮಸ್ಯೆಗಳ ಕುರಿತು ಜಾಗೃತಿ ಮೂಡಿಸುವ ಅಗತ್ಯವಿದೆ ಎಂದು ಹೇಳಿದರು.

ರಾಜ್ಯ ಹಾಗೂ ರಾಷ್ಟ್ರ ಪ್ರಶಸ್ತಿ ವಿಜೇತರಾದ ಸಮಿತಿಯ ರಾಜ್ಯಾಧ್ಯಕ್ಷರಾದ ಆನಂದ್ ಸಿ. ತಿರುಮಲ ಮಾತನಾಡಿ, ಕಾನೂನು ಸಲಹಾ ಕೇಂದ್ರಗಳನ್ನು ಸ್ಥಾಪಿಸುವುದು ಸೇರಿದಂತೆ ಹಲವು ಮಹತ್ವದ ನಿರ್ಧಾರಗಳನ್ನು ಕೈಗೊಳ್ಳಬೇಕು. ಕುಟುಂಬ ನ್ಯಾಯಾಲಯ ಪ್ರಕರಣಗಳಲ್ಲಿ ಸುಳ್ಳು ಆರೋಪಗಳಿಂದ ಬಳಲುತ್ತಿರುವ ಪುರುಷರಿಗೆ ನ್ಯಾಯ ದೊರಕಿಸುವ ನಿಟ್ಟಿನಲ್ಲಿ ಸರ್ಕಾರದ ಗಮನ ಸೆಳೆಯುವಂತೆ ಹೋರಾಟ ನಡೆಸುವುದು ಹಾಗೂ ಸಂಬಂಧಪಟ್ಟ ಇಲಾಖೆಗಳೊಂದಿಗೆ ಸಂವಾದ ನಡೆಸುವುದು ಅತ್ಯಂತ ಮುಖ್ಯವಾಗಿದೆ ಎಂದು ಹೇಳಿದರು.

ಕಾರ್ಯಾಧ್ಯಕ್ಷರಾದ ವಕೀಲರಾದ ಲಯನ್ ಶ್ರೀಧರ್ ಮಾತನಾಡಿ, ಮುಂದಿನ ದಿನಗಳಲ್ಲಿ ರಾಜ್ಯಮಟ್ಟದ ಸಮಾವೇಶ ಹಾಗೂ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸುವ ಕುರಿತು ಸಭೆಯಲ್ಲಿ ತೀರ್ಮಾನ ಕೈಗೊಳ್ಳಲಾಗಿದೆ. ಪುರುಷರ ಕಲ್ಯಾಣ ಹಾಗೂ ರಕ್ಷಣೆಗೆ ಸಮಿತಿ ಶಕ್ತಿಯಾಗಿ ಕಾರ್ಯನಿರ್ವಹಿಸಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಗಣರಾಜ್ಯೋತ್ಸವದ ಈ ಸಂದರ್ಭದಲ್ಲಿ ರಾಜ್ಯದಲ್ಲಿ ಪುರುಷರ ಹಕ್ಕುಗಳ ಕುರಿತು ಸಂಘಟಿತ ಹೋರಾಟ ನಡೆಸುವ ಅಗತ್ಯವಿದ್ದು, ಪುರುಷರ ಗೌರವವನ್ನು ಕಾಪಾಡುವುದು ಬಹಳ ಮುಖ್ಯ ಎಂಬ ಒಮ್ಮತದ ಅಭಿಪ್ರಾಯ ಸಭೆಯಲ್ಲಿ ವ್ಯಕ್ತವಾಯಿತು.

**ರಾಜ್ಯ ಮಹಿಳಾ ಕಾರ್ಯಾಧ್ಯಕ್ಷರು:** ಕರ್ನಾಟಕ ರಾಜ್ಯ ಪುರುಷರ ಕಲ್ಯಾಣ ಮತ್ತು ರಕ್ಷಣಾ ಸಮಿತಿ (ರಿ), ಬೆಂಗಳೂರು

ರಾಜ್ಯದಲ್ಲಿ ಪುರುಷರ ಕಲ್ಯಾಣ ಮತ್ತು ರಕ್ಷಣೆಗೆ ಸಮಿತಿ ಸಂಘಟಿತವಾಗಿ ಕಾರ್ಯನಿರ್ವಹಿಸಲಿದೆ ಎಂಬ ವಿಶ್ವಾಸವನ್ನು ಪದಾಧಿಕಾರಿಗಳು ವ್ಯಕ್ತಪಡಿಸಿದರು.

ಸಭೆಯಲ್ಲಿ ಗೌರವ ಅಧ್ಯಕ್ಷರಾದ ಮ. ನಿ. ಪ್ರ. ಶರಣ ಬಸವ ಶ್ರೀ ಸಂಘಮೇಶ್ ನಾಥ್, ರಾಜ್ಯ ಮಹಿಳಾ ಅಧ್ಯಕ್ಷರಾದ ಆರತಿ ಎಂ, ಕಾರ್ಯಾಧ್ಯಕ್ಷರಾದ ಆರ್. ಜೆ. ಪ್ರಿಯಾಂಕ (ರೇಡಿಯೋ ಜಾಕಿ), ಉಪಾಧ್ಯಕ್ಷರಾದ ನಾಗರಾಜ್ ಯಾದವ್, ಪ್ರಧಾನ ಕಾರ್ಯದರ್ಶಿಗಳಾದ ಮುನಿಕುಮಾರ್, ಖಜಾಂಚಿ ರಂಗನಾಥ್ ಎಲ್. ಪಾತ್ರೋಟಿ, ನಿರ್ದೇಶಕರು ಗುರುಮೂರ್ತಿ, ಡಾ. ಅರ್ಜುನ್ ಎಚ್, ಬಂಡಿ ನಾಗರಾಜ್ ಪಾಟೀಲ್ ಕುಮಾರ್ ಸೇರಿದಂತೆ ಹಲವರು ಭಾಗವಹಿಸಿದ್ದರು.

# ಲಕ್ಷ್ಮಿಸಾರ ಗೇಟ್ ಬಳಿ ನೂತನ ಮಾರುಕಟ್ಟೆಗೆ : ಸರಸ್ವತಿಸ್ವಾಮಿ ಚಾಲನೆ



**ಚಿತ್ರದುರ್ಗ:** ರೈತರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಗ್ರಾಮೀಣ ಭಾಗಗಳಲ್ಲಿ ಮಾರುಕಟ್ಟೆಗಳನ್ನು ನಿರ್ಮಾಣ ಮಾಡಿ ಕೊಡುಕೊಳ್ಳುವ ವ್ಯವಹಾರ ಚಟುವಟಿಕೆಗಳನ್ನು ಮಾಡುವ ಕೆಲಸವನ್ನು ಮಾಡಲಾಗಿದೆ ಎಂದು ಲಕ್ಷ್ಮಿಸಾರ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಸರಸ್ವತಿ ಸ್ವಾಮಿಯವರು ತಿಳಿಸಿದರು.

ಸಿರಿಗೆರೆ ಸಮೀಪದ ಲಕ್ಷ್ಮೀಸಾಗರ ಗೇಟ್ ಬಳಿ ಇರುವ ಗ್ರಾಮೀಣ ಸಂತೆಯ ಮಾರುಕಟ್ಟೆಯನ್ನು ಮಂಗಳವಾರ ಉದ್ಘಾಟಿಸಿ ಮಾತನಾಡಿದರು ಗ್ರಾಮೀಣ ಭಾಗದ ರೈತರು ಬೆಳೆದಂತಹ ಹಣ್ಣು ತರಕಾರಿಗಳನ್ನ ಮಧ್ಯವರ್ತಿಗಳ ಹಾವಳಿ ಇಲ್ಲದೆ ತಾವೇ ಮಾರಾಟ ಮಾಡಿ ಉತ್ತಮ ಲಾಭವನ್ನು ಗಳಿಸುವ ನಿಟ್ಟಿನಲ್ಲಿ ಮಾರುಕಟ್ಟೆಯನ್ನು ತೆರೆಯಲಾಗಿದೆ ಇದರ ಸದ್ಬಳಕೆಯನ್ನು ರೈತಾಪಿ ವರ್ಗದವರು ಬಳಸಿಕೊಳ್ಳಬೇಕಿದೆ ಎಂದು ತಿಳಿಸಿದರು.

ಲಕ್ಷ್ಮಿಸಾಗರ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಜಯಶೀಲಾ ಅವರು ಮಾತನಾಡಿ ಬಹುದಿನಗಳಿಂದ ಉದ್ಘಾಟನೆ ಭಾಗ್ಯವನ್ನ ಕಾಣದೆ ನೆನೆಗುದಿಗೆ ಬಿದ್ದಿದ್ದಂತ ಮಾರುಕಟ್ಟೆಗೆ ಮತ್ತೆ ಪುನರ್ಜೀವವನ್ನು ಕಲ್ಪಿಸಲಾಗಿದೆ, ರೈತರು ತಮ್ಮ ಕೃಷಿ ಜಮೀನಿನಲ್ಲಿ ಬೆಳೆದ ತರಕಾರಿ, ಸೊಪ್ಪು, ಹಣ್ಣು ಮತ್ತು ಹೂಗಳನ್ನು ಮಾರಾಟ ಮಾಡಲು ಸೂಕ್ತ ಮಾರುಕಟ್ಟೆ ಒದಗಿಸಲು ಹಾಗೂ ಗ್ರಾಮೀಣ ರೈತರ ಬದುಕಿಗೆ ಭರವಸೆ ನೀಡಲು ಮತ್ತು ಸ್ಥಳೀಯ ಉತ್ಪನ್ನಗಳಿಗೆ ಪ್ರೋತ್ಸಾಹ ನೀಡುವ ಉದ್ದೇಶದಿಂದ ಲಕ್ಷ್ಮೀಸಾಗರ ಗ್ರಾಮದಲ್ಲಿ ಗ್ರಾಮೀಣ ಸಂತೆ ಪ್ರಾರಂಭವಾಗುತ್ತಿದ್ದು ರೈತರು ಬೆಳೆದಂತಹ ತರಕಾರಿ ಹಾಗೂ ಸೊಪ್ಪು ಹಣ್ಣುಗಳನ್ನು ಪ್ರತಿ ಭಾನುವಾರದ ಸಂತೆಗೆ ತಂದು ಮಾರಾಟ ಮಾಡಿ ಎಂದು ತಿಳಿಸಿದ್ದಾರೆ.

ಪ್ರತಿ ಭಾನುವಾರ ಸಂತೆ ನಡೆಯಲಿದ್ದು ಲಕ್ಷ್ಮಿಸಾಗರ ಸುತ್ತಮುತ್ತಲಿನ ಗ್ರಾಮಸ್ಥರು ಸಂತೆಯಲ್ಲಿ ಬಂದು ಕೊಡುಕೊಳ್ಳುವಿಕೆ ವ್ಯಾಪಾರಿಕರಣ ಮಾಡಬಹುದಾಗಿದೆ ಗ್ರಾಮ ಪಂಚಾಯಿತಿ ವತಿಯಿಂದ ಸ್ವಚ್ಛತೆಗೆ ಹೆಚ್ಚಿನ ಆದ್ಯತೆಯನ್ನು ನೀಡಲಾಗುವುದು ಜೊತೆಗೆ ಮೂಲ ಭೂತ ಸೌಕರ್ಯಗಳನ್ನು ಸಹ ಮಾರುಕಟ್ಟೆಗೆ ಒದಗಿಸಲಾಗುವುದು ಮತ್ತು ಲಕ್ಷ್ಮಿಸಾಗರ, ವಿಜಾಪುರ, ಸಿರಿಗೆರೆ ಸರ್ಕಲ್, ಕೆ.ಬಳ್ಳಕಟ್ಟೆ, ಬಿರಾವರ, ಸಾದರಹಳ್ಳಿ, ಕೊಡಗವಳ್ಳಿ, ಕಲ್ಕುಂಟೆ, ಬಳಗಟ್ಟೆ, ಕಬ್ಬುಗೆರೆ ಸುತ್ತಮುತ್ತಲಿನ ರೈತಾಪಿ ವರ್ಗದವರು ಹಾಗೂ ಸಾರ್ವಜನಿಕರು ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕಿದೆ ಎಂದರು.

ಈ ಸಂದರ್ಭದಲ್ಲಿ ಲಕ್ಷ್ಮಿಸಾರ ಗ್ರಾಮ ಪಂಚಾಯಿತಿ ಸದಸ್ಯರಾದ ಧನಂಜಯ, ಸುನಿಲ್, ಕವಿತಾ, ನಾಗರಾಜ್, ವಸಂತ್, ಸುರೇಶ್, ಅಲಿಜಾನ್ ಹಾಗೂ ಪಂಚಾಯತ್ ಸಿಬ್ಬಂದಿಗಳಾದ ಬಿಲ್ ಕಲೆಕ್ಟರ್ ಚಿದಾನಂದ್, ಕಾರ್ಯದರ್ಶಿ ಸತೀಶ್ ಹಾಗೂ ಗ್ರಾಮಸ್ಥರಾದ ಬಸವರಾಜ್, ನಾಗರಾಜ್ ಲಕ್ಷ್ಮಿಸಾಗರ, ಪರುಶುರಾಮ ಹಾಗೂ ಇತರರು ಇದ್ದರು.

# 24ನೇ ಕರ್ನಾಟಕ ಸ್ಟೇಟ್ ಲೆವೆಲ್ ಟೈಕ್ವಾಂಡೋ: ಪೂಜಾ ಶ್ರೀ ಚಿಕ್ಕಣ್ಣ ಸಾಧನೆ



ಬೆಂಗಳೂರಿನ ಕೋರಮಂಗಲದ ಒಳ ಕ್ರೀಡಾಂಗಣದಲ್ಲಿ ಮೂರು ದಿನ ನಡೆದ 24ನೇ ಕರ್ನಾಟಕ ಸ್ಟೇಟ್ ಲೆವೆಲ್ ಟೈಕೊಂಡೊ ಪಂದ್ಯಾವಳಿಯಲ್ಲಿ ದಾಸರಹಳ್ಳಿ ವಿಧಾನ ಸಭಾ ಕ್ಷೇತ್ರದ ಚಿಕ್ಕಬಾಣಾವರ ಪುರಸಭೆಯ ವಾಸಿ ಬಿ. ಎಂ .ಚಿಕ್ಕಣ್ಣ ರವರ ಪುತ್ರಿ, ಪೂಜಾ ಶ್ರೀ ಚಿಕ್ಕಣ್ಣ ರವರು ಕೋಚ್ ನವೀನ್ ಕುಮಾರ್ ರವರ ಮಾರ್ಗದರ್ಶನದಲ್ಲಿ ಬ್ಲಾಕ್ ಬೆಲ್ಟ್ ವಿಭಾಗದಿಂದ ವೈಯಕ್ತಿಕ ಫಾರಿನ್ (ಫೈಟಿಂಗ್) ನಲ್ಲಿ ಪ್ರಥಮ ಸ್ಥಾನ ಪಡೆದು ಚಿನ್ನದ ಪದಕ ಮತ್ತು ಗ್ರೂಪ್ ಫಾರಿಗ್(ಫೈಟಿಂಗ್) ನಲ್ಲಿ ಪ್ರಥಮ ಸ್ಥಾನ ಪಡೆದು ಚಿನ್ನದ ಪದಕ ಹಾಗೂ ಗ್ರೂಪ್ ಪ್ಯಾಟರ್ನ್ ನಲ್ಲಿ ಪ್ರಥಮ ಸ್ಥಾನ ಪಡೆದು ಚಿನ್ನದ ಪದಕ ಹಾಗೂ ವೈಯಕ್ತಿಕ ಪ್ಯಾಟ್ರನ್ ನಲ್ಲಿ ಮೂರನೇ ಸ್ಥಾನ ಪಡೆದು ಕಂಚಿನ ಪದಕ ಒಟ್ಟು ಮೂರು ಚಿನ್ನದ ಪದಕ ಒಂದು ಕಂಚಿನ ಪದಕ ಪಡೆದು ಕರ್ನಾಟಕ ರಾಜ್ಯಕ್ಕೆ ಮತ್ತು ದಾಸರಹಳ್ಳಿ ವಿಧಾನಸಭಾ ಕ್ಷೇತ್ರಕ್ಕೆ ಹಾಗೂ ಚಿಕ್ಕಬಾಣಾವರ ಗ್ರಾಮಕ್ಕೆ ಕೀರ್ತಿಯನ್ನು ತಂದಿದ್ದಾರೆ

ಸುದ್ದಿ ಹಾಗೂ ಜಾಹೀರಾತುಗಾಳಿಗಾಗಿ ಸಂಪರ್ಕಿಸಿ
9538786812\8217606793

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

# ಮಹಿಳಾ ಆರ್ಥಿಕ ಸ್ವಾವಲಂಬನೆಗೆ ನೆರವು : ಶಾಸಕ ಸೋಮಶೇಖರ್




**ಬೆಂಗಳೂರು:** ಕೆಂಗೇರಿ ಕೋಟೆ ವಾರ್ಡ್‌ನ ಬೃಂದಾವನ ಬಡಾವಣೆಯಲ್ಲಿ ಆಯೋಜಿಸಲಾಗಿದ್ದ ಹೊಲಿಗೆ ತರಬೇತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಗಣ್ಯರು, ಮಹಿಳೆಯರು ಸ್ವಾವಲಂಬಿ ಬದುಕು ರೂಪಿಸಿಕೊಂಡು ಆರ್ಥಿಕವಾಗಿ ಸದೃಢರಾಗಲು ಅಗತ್ಯವಿರುವ ಪೂರಕ ತರಬೇತಿ ಹಾಗೂ ಕಾರ್ಯಾಗಾರಗಳನ್ನುಕ್ಷೇತ್ರದಾದ್ಯಂತ ಆಯೋಜಿಸಲಾಗುತ್ತಿದೆ ಎಂದು ತಿಳಿಸಿದರು.

ಮಹಿಳೆಯರು ಸ್ವಂತ ಆದಾಯದ ಮೂಲಕ ತಮ್ಮ ಜೀವನವನ್ನು ರೂಪಿಸಿಕೊಳ್ಳುವಂತಾಗಬೇಕು ಎಂಬ ಉದ್ದೇಶದಿಂದ ಹೊಲಿಗೆ ತರಬೇತಿ ಸೇರಿದಂತೆ ಗೃಹ ಬಳಕೆ ಪದಾರ್ಥಗಳ ತಯಾರಿಕೆ ಮತ್ತು ಇತರೆ ಕೌಶಲ್ಯಾಭಿವೃದ್ಧಿ ಚಟುವಟಿಕೆಗಳಿಗೆ ಪರಿಣಿತರಿಂದ ತರಬೇತಿ ನೀಡಲಾಗುತ್ತಿದೆ ಎಂದು ಹೇಳಿದರು. ಈ ತರಬೇತಿಗಳ ಮೂಲಕ ಮಹಿಳೆಯರು ಕೇವಲ ಕೌಶಲ್ಯ ಗಳಿಸುವುದಲ್ಲದೆ, ಸ್ವಯಂ ಉದ್ಯೋಗ ಆರಂಭಿಸಲು ಅಗತ್ಯವಿರುವ ಮಾರ್ಗದರ್ಶನ ಹಾಗೂ ನೆರವು ಕೂಡ ಒದಗಿಸಲಾಗುತ್ತಿದೆ ಎಂದು ತಿಳಿಸಿದರು.

ತರಬೇತಿ ಪಡೆದ ಮಹಿಳೆಯರು ತಮ್ಮದೇ ಆದ ಉದ್ಯಮ ಆರಂಭಿಸಿ ಆರ್ಥಿಕವಾಗಿ ಸ್ವಾವಲಂಬಿಗಳಾಗುವಂತೆ ಪ್ರೋತ್ಸಾಹಿಸಲಾಗುತ್ತಿದೆ. ಈ ನಿಟ್ಟಿನಲ್ಲಿ ಸರ್ಕಾರದ ಯೋಜನೆಗಳು ಹಾಗೂ ವಿವಿಧ ಸಹಾಯಧನಗಳನ್ನು ಪಡೆಯಲು ಸಹ ಮಾರ್ಗದರ್ಶನ ನೀಡಲಾಗುತ್ತಿದೆ ಎಂದು ಕಾರ್ಯಕ್ರಮದಲ್ಲಿ ತಿಳಿಸಲಾಯಿತು.


**ಮಹಿಳಾ ಸಬಲೀಕರಣವೇ ಸಮಾಜದ ಅಭಿವೃದ್ಧಿಗೆ ಮೂಲ: ಶಿವಮಾದಯ್ಯ:**ಈ ಸಂದರ್ಭ ಮಾತನಾಡಿದ ಬೆಂಗಳೂರು ಜಿಲ್ಲಾ ಪಂಚಾಯತ್ ಮಾಜಿ ಸದಸ್ಯ ಹಾಗೂ ಕಾಂಗ್ರೆಸ್ ಮುಖಂಡ ಆರ್. ಶಿವಮಾದಯ್ಯ, ಮಹಿಳೆಯರು ಆರ್ಥಿಕವಾಗಿ ಸ್ವಾವಲಂಬಿಗಳಾದಾಗ ಮಾತ್ರ ಕುಟುಂಬದ ಪ್ರಗತಿ ಸಾಧ್ಯವಾಗುತ್ತದೆ. ಅದೇ ರೀತಿ ಮಹಿಳಾ ಸಬಲೀಕರಣವೇ ದೇಶದ ಸಮಗ್ರ ಅಭಿವೃದ್ಧಿಗೆ ಬಲ ನೀಡುತ್ತದೆ ಎಂದು ಹೇಳಿದರು.

ಈ ಗುರಿಯನ್ನು ಸಾಧಿಸುವ ನಿಟ್ಟಿನಲ್ಲಿ ಶಾಸಕ ಎಸ್.ಟಿ. ಸೋಮಶೇಖರ್ ಅವರ ಸಹಕಾರ ಹಾಗೂ ನೆರವಿನೊಂದಿಗೆ ಮಹಿಳೆಯರ ಕೌಶಲ್ಯಾಭಿವೃದ್ಧಿಗೆ ಪೂರಕವಾದ ವಿವಿಧ ತರಬೇತಿ ಕಾರ್ಯಕ್ರಮಗಳನ್ನು ನಿರಂತರವಾಗಿ ನಡೆಸಲಾಗುತ್ತಿದೆ ಎಂದು ಅವರು ತಿಳಿಸಿದರು. ಗ್ರಾಮ ಹಾಗೂ ನಗರ ಪ್ರದೇಶಗಳ ಮಹಿಳೆಯರು ಈ ಅವಕಾಶಗಳನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಮನವಿ ಮಾಡಿದರು.

**ಕಾರ್ಯಕ್ರಮದಲ್ಲಿ ಹಲವು ಮುಖಂಡರ ಭಾಗವಹಿಕೆ:**ಕಾರ್ಯಕ್ರಮದಲ್ಲಿ ಕೆಂಗೇರಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮೈಲಸಂದ್ರ ನಾಗರಾಜ್, ಮಾಜಿ ಅಧ್ಯಕ್ಷ ಅಮೃತ್ ಗೌಡ, ಮಹಿಳಾ ಅಧ್ಯಕ್ಷೆ ಪಾರ್ವತಿ, ಕಾರ್ಯದರ್ಶಿ ಶ್ರೀನಾಥ್ ಸೇರಿದಂತೆ ಮುಖಂಡರಾದ ಪ್ರಕಾಶ್, ರಾಮಚಂದ್ರ, ಲಕ್ಕಣ್ಣ ಮೊದಲಾದವರು ಉಪಸ್ಥಿತರಿದ್ದರು. ಅವರು ತರಬೇತಿ ಪಡೆಯುತ್ತಿರುವ ಮಹಿಳೆಯರಿಗೆ ಶುಭಾಶಯ ಕೋರಿದ್ದು, ಇಂತಹ ಕಾರ್ಯಕ್ರಮಗಳು ಮಹಿಳೆಯರ ಜೀವನದಲ್ಲಿ ಹೊಸ ಬೆಳಕು ಮೂಡಿಸಲಿದೆ ಎಂದು ಅಭಿಪ್ರಾಯಪಟ್ಟರು.

ಒಟ್ಟಿನಲ್ಲಿ ಬೃಂದಾವನ ಬಡಾವಣೆಯಲ್ಲಿ ಆರಂಭಗೊಂಡ ಈ ಹೊಲಿಗೆ ತರಬೇತಿ ಕಾರ್ಯಕ್ರಮವು ಮಹಿಳೆಯರಿಗೆ ಸ್ವಯಂ ಉದ್ಯೋಗದ ದಾರಿ ತೆರೆದು, ಆರ್ಥಿಕ ಸ್ವಾವಲಂಬನೆ ಸಾಧಿಸಲು ನೆರವಾಗಲಿದೆ ಎಂಬ ವಿಶ್ವಾಸವನ್ನು ನಾಯಕರು ವ್ಯಕ್ತಪಡಿಸಿದರು.

# ಸಿಗರೇಟ್ ಸೇದಲು ಮ್ಯಾಚ್ ಬಾಕ್ಸ್ ಕೊಡದ್ದಕ್ಕೆ ಜೀವವೇ ಹೋಯ್ತು!

**ದೇವನಹಳ್ಳಿ:** ಸಾಮಾನ್ಯವಾಗಿ ಹಳೆಯ ದ್ವೇಷ, ವೈಯಕ್ತಿಕ ವೈಷಮ್ಯ ಅಥವಾ ಅಸೂಯೆಗಳಿಂದ ಕೊಲೆಗಳು ನಡೆಯುತ್ತಿರುವುದನ್ನು ನಾವು ಕೇಳುತ್ತೇವೆ. ಆದರೆ ಸಿಗರೇಟ್ ಹಚ್ಚಲು ಬೆಂಕಿಪೊಟ್ಟಣ ನೀಡಲಿಲ್ಲ ಎಂಬ ಅತ್ಯಂತ ಕ್ಷುಲ್ಲಕ ಕಾರಣಕ್ಕೆ ಯುವಕನೊಬ್ಬನನ್ನೇ ಹತ್ಯೆ ಮಾಡಿರುವ ಆಘಾತಕಾರಿ ಘಟನೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ ತಾಲೂಕಿನ ಬಾಶೆಟ್ಟಹಳ್ಳಿ ಗ್ರಾಮದ ವಿನಾಯಕ ನಗರದಲ್ಲಿ ನಡೆದಿದ್ದು, ಈ ಪ್ರಕರಣ ತಡವಾಗಿ ಬೆಳಕಿಗೆ ಬಂದಿದೆ.

ಈ ಘಟನೆಯಲ್ಲಿ ಹಲವು ದಿನಗಳಿಂದ ಪರಾರಿಯಾಗಿದ್ದ ನಾಲ್ವರು ಆರೋಪಿಗಳನ್ನು ಪೊಲೀಸರು ಬಂಧಿಸಿದ್ದು, ಪ್ರಕರಣದ ಸುತ್ತಮುತ್ತಲಿನ ವಿವರಗಳು ಈಗ ಬಹಿರಂಗವಾಗುತ್ತಿವೆ.

**ಹೊಸವರ್ಷದ ಪಾರ್ಟಿಯಲ್ಲೇ ಶುರುವಾಯಿತು ಗಲಾಟೆ:**ಪೊಲೀಸರ ಮಾಹಿತಿ ಪ್ರಕಾರ, ಹೊಸವರ್ಷದ ಸಂದರ್ಭದಲ್ಲಿ ಆರೋಪಿಗಳು ಪಾರ್ಟಿ ಮಾಡುತ್ತಿದ್ದ ವೇಳೆ ಸುಶಾಂತ್ ಎಂಬ ಯುವಕನ ಬಳಿ ಸಿಗರೇಟ್ ಹಚ್ಚಲು ಬೆಂಕಿಪೊಟ್ಟಣ ಕೇಳಿದ್ದಾರೆ. ಆದರೆ ಸುಶಾಂತ್ ಇದಕ್ಕೆ ನಿರಾಕರಿಸಿದ್ದಾನೆ. ಬಳಿಕ ಮ್ಯಾಚ್ ಬಾಕ್ಸ್ ತಂದುಕೊಡಬೇಕು ಎಂದು ಒತ್ತಾಯಿಸಿದರೂ, ಸುಶಾಂತ್ ಒಪ್ಪದೇ ಇದ್ದ ಕಾರಣ ಆರೋಪಿಗಳಲ್ಲಿ ಕೋಪ ಉಕ್ಕಿಬಂದಿದೆ.

ಈ ವಿಚಾರದಿಂದ ಕೋಪಗೊಂಡ ಉಜ್ವಲ್ ಪ್ರಸಾದ್, ಪ್ರಿನ್ಸ್ ಮತ್ತು ಸೂರಜ್ ರಾಮ್ ಸೇರಿ, ಓರ್ವ ಅಪ್ರಾಪ್ತನ ಸಹಿತ ನಾಲ್ವರು ಸೇರಿ ಸುಶಾಂತ್‌ನ ಮೇಲೆ ದಾಳಿ ನಡೆಸಿದ್ದಾರೆ. ಗಲಾಟೆ ತೀವ್ರಗೊಂಡು ಸುಶಾಂತ್‌ನ್ನು ಅಟ್ಟಾಡಿಸಿಕೊಂಡು ಹಲ್ಲೆ ಮಾಡಿದ್ದಾರೆ ಎಂದು ತಿಳಿದುಬಂದಿದೆ.



ಮೃತ ಸುಶಾಂತ್

**ಎರಡನೇ ಮಹಡಿಯಿಂದ ಕೆಳಗೆ ತಳ್ಳಿದ ಆರೋಪಿಗಳು:**ಗಲಾಟೆ ತೀವ್ರ ಹಂತ ತಲುಪಿದಾಗ ಆರೋಪಿಗಳು ಸುಶಾಂತ್‌ನ್ನು ಹಿಡಿದು ಕಟ್ಟಡದ ಎರಡನೇ ಮಹಡಿಯಿಂದ ಕೆಳಗೆ ತಳ್ಳಿದ್ದಾರೆ. ಈ ಘಟನೆ ಸ್ಥಳೀಯರನ್ನು ಬೆಚ್ಚಿಬೀಳುವಂತೆ ಮಾಡಿದ್ದು, ಗಂಭೀರವಾಗಿ ಗಾಯಗೊಂಡ ಸುಶಾಂತ್ ಸ್ಥಳದಲ್ಲೇ ಪ್ರಾಣ ಕಳೆದುಕೊಂಡಿದ್ದಾನೆ ಎಂದು ತಿಳಿದುಬಂದಿದೆ.

ಕೃತ್ಯ ಎಸಗಿದ ನಾಲ್ವರಲ್ಲಿ ಓರ್ವ ಅಪ್ರಾಪ್ತನಾಗಿದ್ದು, ಈ ಘಟನೆ ನಡೆದ ಬಳಿಕ ಉಳಿದ ಮೂವರು ಆರೋಪಿಗಳೊಂದಿಗೆ ಈತ ಸಹ ಸ್ಥಳದಿಂದ ಪರಾರಿಯಾಗಿದ್ದಾನೆ.

**ಪೊಲೀಸ್ ತನಿಖೆ ಮತ್ತು ಆರೋಪಿಗಳ ಬಂಧನ:**ಘಟನೆಯ ಮಾಹಿತಿ ತಿಳಿಯುತ್ತಿದ್ದಂತೆ ಸ್ಥಳಕ್ಕೆ ಪೊಲೀಸರು ಆಗಮಿಸಿ ಪರಿಶೀಲನೆ ನಡೆಸಿ ತನಿಖೆ ಆರಂಭಿಸಿದ್ದರು. ಸುತ್ತಮುತ್ತಲಿನ ಸಿಸಿಟಿವಿ ದೃಶ್ಯಾವಳಿ ಹಾಗೂ ಸ್ಥಳೀಯರಿಂದ ಲಭ್ಯವಾದ ಮಾಹಿತಿಯ ಆಧಾರದ ಮೇಲೆ ಆರೋಪಿಗಳಿಗಾಗಿ ಶೋಧ ಕಾರ್ಯ ನಡೆಸಲಾಗಿತ್ತು.



ನಿರಂತರ ತನಿಖೆ ಮತ್ತು ಕಾರ್ಯಾಚರಣೆಯ ಬಳಿಕ ಪರಾರಿಯಾಗಿದ್ದ ನಾಲ್ವರು ಆರೋಪಿಗಳನ್ನು ಪೊಲೀಸರು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ. ಬಂಧಿತ ಆರೋಪಿಗಳಲ್ಲಿ ಓರ್ವ ಅಪ್ರಾಪ್ತನಾಗಿದ್ದು, ಉಳಿದ ಮೂವರನ್ನು ವಿಚಾರಣೆಗೆ ಒಳಪಡಿಸಲಾಗಿದೆ. ಈ ಘಟನೆಗೆ ಸಂಬಂಧಿಸಿದಂತೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು ಮುಂದಿನ ತನಿಖೆ ಮುಂದುವರಿಸಿದ್ದಾರೆ.

ಒಟ್ಟಿನಲ್ಲಿ ಸಣ್ಣ ವಿಚಾರವೂ ಹೇಗೆ ಪ್ರಾಣಾಪಾಯಕ್ಕೆ ಕಾರಣವಾಗಬಹುದು ಎಂಬುದಕ್ಕೆ ಈ ಘಟನೆ ದುಃಖದ ಉದಾಹರಣೆಯಾಗಿದ್ದು, ಸಾರ್ವಜನಿಕರಲ್ಲಿ ತೀವ್ರ ಆಕ್ರೋಶ ಹಾಗೂ ಆತಂಕ ಮೂಡಿಸಿದೆ.

ಸುದ್ದಿ ಹಾಗೂ ಜಾಹೀರಾತುಗಾಳಿಗಾಗಿ ಸಂಪರ್ಕಿಸಿ 9538786812\8217606793

# ಲಕ್ಷ್ಮಿಸಾರ ಗೇಟ್ ಬಳಿ ನೂತನ ಮಾರುಕಟ್ಟೆಗೆ : ಸರಸ್ವತಿಸ್ವಾಮಿ ಚಾಲನೆ



**ಚಿತ್ರದುರ್ಗ:** ರೈತರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಗ್ರಾಮೀಣ ಭಾಗಗಳಲ್ಲಿ ಮಾರುಕಟ್ಟೆಗಳನ್ನು ನಿರ್ಮಾಣ ಮಾಡಿ ಕೊಡುಕೊಳ್ಳುವ ವ್ಯವಹಾರ ಚಟುವಟಿಕೆಗಳನ್ನು ಮಾಡುವ ಕೆಲಸವನ್ನು ಮಾಡಲಾಗಿದೆ ಎಂದು ಲಕ್ಷ್ಮಿಸಾರ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಸರಸ್ವತಿ ಸ್ವಾಮಿಯವರು ತಿಳಿಸಿದರು.

ಸಿರಿಗೆರೆ ಸಮೀಪದ ಲಕ್ಷ್ಮೀಸಾಗರ ಗೇಟ್ ಬಳಿ ಇರುವ ಗ್ರಾಮೀಣ ಸಂತೆಯ ಮಾರುಕಟ್ಟೆಯನ್ನು ಮಂಗಳವಾರ ಉದ್ಘಾಟಿಸಿ ಮಾತನಾಡಿದರು ಗ್ರಾಮೀಣ ಭಾಗದ ರೈತರು ಬೆಳೆದಂತಹ ಹಣ್ಣು ತರಕಾರಿಗಳನ್ನ ಮಧ್ಯವರ್ತಿಗಳ ಹಾವಳಿ ಇಲ್ಲದೆ ತಾವೇ ಮಾರಾಟ ಮಾಡಿ ಉತ್ತಮ ಲಾಭವನ್ನು ಗಳಿಸುವ ನಿಟ್ಟಿನಲ್ಲಿ ಮಾರುಕಟ್ಟೆಯನ್ನು ತೆರೆಯಲಾಗಿದೆ ಇದರ ಸದ್ಬಳಕೆಯನ್ನು ರೈತಾಪಿ ವರ್ಗದವರು ಬಳಸಿಕೊಳ್ಳಬೇಕಿದೆ ಎಂದು ತಿಳಿಸಿದರು.

ಲಕ್ಷ್ಮಿಸಾಗರ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಜಯಶೀಲಾ ಅವರು ಮಾತನಾಡಿ ಬಹುದಿನಗಳಿಂದ ಉದ್ಘಾಟನೆ ಭಾಗ್ಯವನ್ನ ಕಾಣದೆ ನೆನೆಗುದಿಗೆ ಬಿದ್ದಿದ್ದಂತ ಮಾರುಕಟ್ಟೆಗೆ ಮತ್ತೆ ಪುನರ್ಜೀವವನ್ನು ಕಲ್ಪಿಸಲಾಗಿದೆ, ರೈತರು ತಮ್ಮ ಕೃಷಿ ಜಮೀನಿನಲ್ಲಿ ಬೆಳೆದ ತರಕಾರಿ, ಸೊಪ್ಪು, ಹಣ್ಣು ಮತ್ತು ಹೂಗಳನ್ನು ಮಾರಾಟ ಮಾಡಲು ಸೂಕ್ತ ಮಾರುಕಟ್ಟೆ ಒದಗಿಸಲು ಹಾಗೂ ಗ್ರಾಮೀಣ ರೈತರ ಬದುಕಿಗೆ ಭರವಸೆ ನೀಡಲು ಮತ್ತು ಸ್ಥಳೀಯ ಉತ್ಪನ್ನಗಳಿಗೆ ಪ್ರೋತ್ಸಾಹ ನೀಡುವ ಉದ್ದೇಶದಿಂದ ಲಕ್ಷ್ಮೀಸಾಗರ ಗ್ರಾಮದಲ್ಲಿ ಗ್ರಾಮೀಣ ಸಂತೆ ಪ್ರಾರಂಭವಾಗುತ್ತಿದ್ದು ರೈತರು ಬೆಳೆದಂತಹ ತರಕಾರಿ ಹಾಗೂ ಸೊಪ್ಪು ಹಣ್ಣುಗಳನ್ನು ಪ್ರತಿ ಭಾನುವಾರದ ಸಂತೆಗೆ ತಂದು ಮಾರಾಟ ಮಾಡಿ ಎಂದು ತಿಳಿಸಿದ್ದಾರೆ.

ಪ್ರತಿ ಭಾನುವಾರ ಸಂತೆ ನಡೆಯಲಿದ್ದು ಲಕ್ಷ್ಮಿಸಾಗರ ಸುತ್ತಮುತ್ತಲಿನ ಗ್ರಾಮಸ್ಥರು ಸಂತೆಯಲ್ಲಿ ಬಂದು ಕೊಡುಕೊಳ್ಳುವಿಕೆ ವ್ಯಾಪಾರಿಕರಣ ಮಾಡಬಹುದಾಗಿದೆ ಗ್ರಾಮ ಪಂಚಾಯಿತಿ ವತಿಯಿಂದ ಸ್ವಚ್ಛತೆಗೆ ಹೆಚ್ಚಿನ ಆದ್ಯತೆಯನ್ನು ನೀಡಲಾಗುವುದು ಜೊತೆಗೆ ಮೂಲ ಭೂತ ಸೌಕರ್ಯಗಳನ್ನು ಸಹ ಮಾರುಕಟ್ಟೆಗೆ ಒದಗಿಸಲಾಗುವುದು ಮತ್ತು ಲಕ್ಷ್ಮಿಸಾಗರ, ವಿಜಾಪುರ, ಸಿರಿಗೆರೆ ಸರ್ಕಲ್, ಕೆ.ಬಳ್ಳಕಟ್ಟೆ, ಬಿರಾವರ, ಸಾದರಹಳ್ಳಿ, ಕೊಡಗವಳ್ಳಿ, ಕಲ್ಕುಂಟೆ, ಬಳಗಟ್ಟೆ, ಕಬ್ಬುಗೆರೆ ಸುತ್ತಮುತ್ತಲಿನ ರೈತಾಪಿ ವರ್ಗದವರು ಹಾಗೂ ಸಾರ್ವಜನಿಕರು ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕಿದೆ ಎಂದರು.

ಈ ಸಂದರ್ಭದಲ್ಲಿ ಲಕ್ಷ್ಮಿಸಾರ ಗ್ರಾಮ ಪಂಚಾಯಿತಿ ಸದಸ್ಯರಾದ ಧನಂಜಯ, ಸುನಿಲ್, ಕವಿತಾ, ನಾಗರಾಜ್, ವಸಂತ್, ಸುರೇಶ್, ಅಲಿಜಾನ್ ಹಾಗೂ ಪಂಚಾಯತ್ ಸಿಬ್ಬಂದಿಗಳಾದ ಬಿಲ್ ಕಲೆಕ್ಟರ್ ಚಿದಾನಂದ್, ಕಾರ್ಯದರ್ಶಿ ಸತೀಶ್ ಹಾಗೂ ಗ್ರಾಮಸ್ಥರಾದ ಬಸವರಾಜ್, ನಾಗರಾಜ್ ಲಕ್ಷ್ಮಿಸಾಗರ, ಪರುಶುರಾಮ ಹಾಗೂ ಇತರರು ಇದ್ದರು.

# ಅರುಣ್ ಬಿ. ಅಂದ್ರಹಳ್ಳಿ ವಾರ್ಡ್ ಯುವ ಕಾಂಗ್ರೆಸ್ ಅಧ್ಯಕ್ಷ



**ಯಶವಂತಪುರ:** ಅಂದ್ರಹಳ್ಳಿ ವಾರ್ಡ್ ಯುವ ಕಾಂಗ್ರೆಸ್ ಅಧ್ಯಕ್ಷರಾಗಿ ಅರುಣ್ ಬಿ. ಅವರನ್ನು ಕ್ಷೇತ್ರ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಎಂ. ಅರುಣ್ ಕುಮಾರ್ ನೇಮಕ ಮಾಡಿದ್ದಾರೆ.

ಈ ವೇಳೆ ಮಾತನಾಡಿದ ನೂತನ ಅಧ್ಯಕ್ಷ ಅರುಣ್ ಬಿ., ಕಾಂಗ್ರೆಸ್ ಪಕ್ಷದ ಬಲವರ್ಧನೆ ಹಾಗೂ ಸಂಘಟನೆಗೆ ಶಕ್ತಿಮೀರಿ ಶ್ರಮಿಸುವುದಾಗಿ ತಿಳಿಸಿದರು. ಜತೆಗೆ ಸರ್ಕಾರಿ ಸವಲತ್ತು ಹಾಗೂ ಯೋಜನೆಗಳನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸಲು ಪ್ರಾಮಾಣಿಕವಾಗಿ ದುಡಿಯುವುದಾಗಿ ಹೇಳಿದರು.

ಶಾಸಕ ಎಸ್.ಟಿ. ಸೋಮಶೇಖರ್ ಅವರ ಸಹಕಾರ ಹಾಗೂ ಮಾರ್ಗದರ್ಶನದಲ್ಲಿ ವಾರ್ಡ್ ಅಭಿವೃದ್ಧಿ ಕಾರ್ಯಗಳ ಜತೆಗೆ ಜನರ ಸಮಸ್ಯೆಗಳಿಗೆ ಸ್ಪಂದಿಸುವುದಾಗಿ ಭರವಸೆ ನೀಡಿದರು.

# ವಿಬಿ ರಾಮ್ ಜಿ ರದ್ದುಪಡಿಸಿ ನರೇಗಾ ಪುನಸ್ಥಾಪನೆಯಾಗುವವರೆಗೆ ಹೋರಾಟ- ಮುಖ್ಯಮಂತ್ರಿ ಸಿದ್ದರಾಮಯ್ಯ

**ಬೆಂಗಳೂರು:** ಕೇಂದ್ರ ಸರ್ಕಾರ ಜಾರಿಗೊಳಿಸಿರುವ ಜನವಿರೋಧಿ ನೀತಿಗಳನ್ನು ಕಾಂಗ್ರೆಸ್ ಪಕ್ಷ ತೀವ್ರವಾಗಿ ವಿರೋಧಿಸುತ್ತಿದ್ದು, ವಿಬಿ ಜಿ ರಾಮ್ ಜಿ ಕಾಯ್ದೆಯನ್ನು ಸಂಪೂರ್ಣವಾಗಿ ರದ್ದುಪಡಿಸಿ, ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಕಾಯ್ದೆ (ನರೇಗಾ) ಯನ್ನು ಪುನರ್ ಸ್ಥಾಪಿಸುವವರೆಗೂ ಹೋರಾಟವನ್ನು ನಿಲ್ಲಿಸುವ ಪ್ರಶ್ನೆಯೇ ಇಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದರು.

ಅವರು ಇಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಕೆಪಿಸಿಸಿ ವತಿಯಿಂದ 'ಮನರೇಗಾ ಬಚಾವ್ ಸಂಗ್ರಾಮ್' ಅಂಗವಾಗಿ ಆಯೋಜಿಸಲಾಗಿದ್ದ ಬೃಹತ್ ಪ್ರತಿಭಟನೆ ಹಾಗೂ 'ರಾಜಭವನ ಚಲೋ' ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

**ನರೇಗಾ ರದ್ದು ಮಾಡಿ ದುರುದ್ದೇಶದ ಹೊಸ ಕಾಯ್ದೆ ಜಾರಿ: ಸಿದ್ದರಾಮಯ್ಯ ಆರೋಪ:**ಇತ್ತೀಚೆಗೆ ಕೇಂದ್ರದಲ್ಲಿರುವ ಬಿಜೆಪಿ ಸರ್ಕಾರ ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಕಾಯ್ದೆಯನ್ನು ದುರುದ್ದೇಶಪೂರಿತವಾಗಿ ರದ್ದುಪಡಿಸಿ, ಅದರ ಬದಲಿಗೆ ವಿಬಿ ಜಿ ರಾಮ್ ಜಿ ಎಂಬ ಹೊಸ ಕಾಯ್ದೆಯನ್ನು ಜಾರಿಗೆ ತಂದಿದೆ ಎಂದು ಸಿದ್ದರಾಮಯ್ಯ ಆರೋಪಿಸಿದರು. ಈ ಕಾಯ್ದೆಗೆ 'ವಿಕಸಿತ ಭಾರತ – ಗ್ಯಾರಂಟಿ ಫಾರ್ ರೋಜ್ಗಾರ್ ಅಂಡ್ ಆಜೀವಿಕ ಮಿಶನ್ (ಗ್ರಾಮೀಣ)' ಎಂಬ ಆಕರ್ಷಕ ಹೆಸರು ನೀಡಲಾಗಿದೆ. ಆದರೆ ಈ ಹೆಸರಿನ ಹಿಂದೆ ಬಡಜನರ ಹಕ್ಕುಗಳನ್ನು ಕಸಿದುಕೊಳ್ಳುವ ಹುನ್ನಾರ ಅಡಗಿದೆ ಎಂದು ಅವರು ಟೀಕಿಸಿದರು.

**ಬಡವರ ಬಗ್ಗೆ ಚಿಂತಿಸುವುದು ಕಾಂಗ್ರೆಸ್ ಮಾತ್ರ:**2005ರಲ್ಲಿ ಡಾ. ಮನಮೋಹನ್ ಸಿಂಗ್ ಪ್ರಧಾನಿಯಾಗಿದ್ದಾಗ ನರೇಗಾ ಕಾಯ್ದೆಯನ್ನು ಜಾರಿಗೆ ತಂದದ್ದು ಕಾಂಗ್ರೆಸ್ ಸರ್ಕಾರವೇ ಎಂದು ಸ್ಮರಿಸಿದ ಸಿದ್ದರಾಮಯ್ಯ, ಆಹಾರ ಹಕ್ಕು, ಕೆಲಸದ ಹಕ್ಕು, ಶಿಕ್ಷಣ ಹಕ್ಕು, ಮಾಹಿತಿ ಹಕ್ಕು ಹಾಗೂ ಅರಣ್ಯ ಹಕ್ಕು ಕಾಯ್ದೆಗಳು ಸೇರಿದಂತೆ ಹಲವು ಜನಪರ ಕಾಯ್ದೆಗಳು ಕಾಂಗ್ರೆಸ್



ಆಡಳಿತದಲ್ಲಿಯೇ ಜಾರಿಯಾಗಿವೆ ಎಂದು ಹೇಳಿದರು.

ಕಾಂಗ್ರೆಸ್ ಸರ್ಕಾರ ಎಂದಿಗೂ ಮಹಿಳೆಯರು, ದಲಿತರು, ಹಿಂದುಳಿದ ವರ್ಗಗಳು, ಅಲ್ಪಸಂಖ್ಯಾತರು ಮತ್ತು ಸಣ್ಣ ರೈತರ ಹಿತವನ್ನು ಕೇಂದ್ರದಲ್ಲಿಟ್ಟುಕೊಂಡೇ ಆಡಳಿತ ನಡೆಸಿದೆ. ಬಡವರ ಬಗ್ಗೆ ನಿಜವಾದ ಕಾಳಜಿ ಹೊಂದಿರುವ ಪಕ್ಷ ಕಾಂಗ್ರೆಸ್ ಮಾತ್ರ ಎಂದು ಅವರು ಹೇಳಿದರು.

**ಬಡವರು ಸದಾ ಸೇವಕರಾಗಿರಲಿ ಎಂಬ ಬಿಜೆಪಿ-ಆರ್‌ಎಸ್‌ಎಸ್ ಕುತಂತ್ರ:**ಬಿಜೆಪಿ ಸರ್ಕಾರ ಕ್ರಮಬದ್ಧವಾಗಿ ಜನಪರ ಯೋಜನೆಗಳನ್ನು ನಾಶ ಮಾಡುತ್ತಿದೆ ಎಂದು ಆರೋಪಿಸಿದ ಸಿದ್ದರಾಮಯ್ಯ, ಗ್ರಾಮೀಣ ಪ್ರದೇಶಗಳಲ್ಲಿ ಉದ್ಯೋಗ ಸೃಷ್ಟಿಯಾಗದಂತೆ ವ್ಯವಸ್ಥಿತ ಪ್ರಯತ್ನ ನಡೆಯುತ್ತಿದೆ ಎಂದು ಹೇಳಿದರು. ನರೇಗಾ ಯೋಜನೆಯಡಿಯಲ್ಲಿ ಶೇ. 53ರಷ್ಟು ಮಹಿಳೆಯರು, ಶೇ. 28ರಷ್ಟು ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದವರು ಮತ್ತು ಸುಮಾರು 5 ಲಕ್ಷ ಅಂಗವಿಕಲರು ಕೂಲಿ ಕೆಲಸದಲ್ಲಿ ನಿರತರಾಗಿದ್ದರು. ಈ ಯೋಜನೆಯಿಂದ ಗ್ರಾಮೀಣ ಜನರಿಗೆ ಉದ್ಯೋಗದ ಭದ್ರತೆ ಇತ್ತು ಎಂದು ವಿವರಿಸಿದರು.

ಆದರೆ ಈಗ ಕೇಂದ್ರ ಸರ್ಕಾರ ಆರ್‌ಎಸ್‌ಎಸ್ ಜೊತೆಗೂಡಿ ಬಡವರು ಸದಾ ಸೇವಕರಾಗಿಯೇ ಇರಬೇಕು ಎಂಬ ಕುತಂತ್ರ ರೂಪಿಸಿದೆ ಎಂದು ಸಿದ್ದರಾಮಯ್ಯ ಗಂಭೀರ ಆರೋಪ ಮಾಡಿದರು.

**ಬಡವರ ಕೆಲಸವನ್ನು ದಿಲ್ಲಿಯಲ್ಲಿ ನಿರ್ಧರಿಸುವುದು ಅನ್ಯಾಯ:**ಬಿಜೆಪಿಯವರು ಕಾಂಗ್ರೆಸ್ ಜಾರಿಗೆ ತಂದ ಜನಪರ ಗ್ಯಾರಂಟಿ ಯೋಜನೆಗಳನ್ನು 'ವೋಟ್‌ಗಾಗಿ ಮಾಡಿದ ಯೋಜನೆಗಳು' ಎಂದು ಟೀಕಿಸುತ್ತಾರೆ. ಆದರೆ ನರೇಗಾ ಯೋಜನೆಯಿಂದ ಮಹಿಳೆಯರು, ದಲಿತರು, ಹಿಂದುಳಿದ ವರ್ಗಗಳು, ಅಲ್ಪಸಂಖ್ಯಾತರು ಮತ್ತು ಸಣ್ಣ ರೈತರು ವರ್ಷದ ಯಾವುದೇ ದಿನಗಳಲ್ಲಿ ಕೆಲಸ ಪಡೆಯುವ ಅವಕಾಶ ಹೊಂದಿದ್ದರು ಎಂದು ಸಿದ್ದರಾಮಯ್ಯ ಹೇಳಿದರು.

ಈ ಹಿಂದೆ ಗ್ರಾಮಸಭೆಗಳು ಹಾಗೂ ಗ್ರಾಮ ಪಂಚಾಯತಿಗಳೇ ಸ್ಥಳೀಯ ಅಗತ್ಯಕ್ಕೆ ಅನುಗುಣವಾಗಿ ಕೆಲಸವನ್ನು ನಿರ್ಧರಿಸುತ್ತಿದ್ದವು. ಆದರೆ ಈಗ ಗ್ರಾಮೀಣ ಬಡಜನರ ಕೆಲಸವನ್ನು ಸ್ಥಳೀಯ ಆಡಳಿತದಿಂದ ಕಿತ್ತುಕೊಂಡು ದಿಲ್ಲಿಯಲ್ಲಿ ನಿರ್ಧರಿಸಲಾಗುತ್ತಿದೆ. ಇದು ಫೆಡರಲ್ ವ್ಯವಸ್ಥೆಗೆ ವಿರುದ್ಧವಾದ ನಡೆ ಎಂದು ಅವರು ಟೀಕಿಸಿದರು.

**ನರೇಗಾದ 100 ದಿನಗಳ ಉದ್ಯೋಗ ಭರವಸೆ ಕಸಿದುಕೊಳ್ಳಲಾಗಿದೆ:**ನರೇಗಾ ಯೋಜನೆಯಿಂದ ಬಡ ಕೂಲಿಕಾರ್ಮಿಕರಿಗೆ 100 ದಿನಗಳ ಉದ್ಯೋಗ ಭರವಸೆ ಇತ್ತು. ಈ ಕೆಲಸದ ಹಕ್ಕು ಸಂವಿಧಾನಬದ್ಧವಾದದ್ದು. ಆದರೆ ವಿಬಿ ಜಿ ರಾಮ್ ಜಿ ಕಾಯ್ದೆ ಜಾರಿಯಿಂದ ಈ ಹಕ್ಕನ್ನು ಕಸಿದುಕೊಳ್ಳಲಾಗಿದೆ ಎಂದು ಸಿದ್ದರಾಮಯ್ಯ ಹೇಳಿದರು.

ಹಿಂದೆ ನರೇಗಾ ಯೋಜನೆಯ ಸಂಪೂರ್ಣ ವೆಚ್ಚವನ್ನು ಕೇಂದ್ರ ಸರ್ಕಾರವೇ ಭರಿಸುತ್ತಿತ್ತು. ಆದರೆ ಈಗ ಕೇಂದ್ರ ಸರ್ಕಾರ ಅನುದಾನವನ್ನು ಕಡಿತಗೊಳಿಸಿ, ಹೊಸ ಕಾಯ್ದೆಯಡಿ ಶೇ. 40ರಷ್ಟು ವೆಚ್ಚವನ್ನು ರಾಜ್ಯ ಸರ್ಕಾರಗಳೇ ಭರಿಸಬೇಕು, ಕೇಂದ್ರ ಸರ್ಕಾರ ಶೇ. 60ರಷ್ಟು ಮಾತ್ರ ನೀಡುತ್ತದೆ. ಇದರಿಂದ ರಾಜ್ಯ ಸರ್ಕಾರಗಳ ಮೇಲೆ ಭಾರೀ ಹೊರೆ ಬಿದ್ದಿದೆ ಎಂದು ಅವರು ಹೇಳಿದರು.

**ಜನವಿರೋಧಿ ನೀತಿಗಳ ವಿರುದ್ಧ ದೇಶವ್ಯಾಪಿ ಹೋರಾಟ ಅಗತ್ಯ:** ಕೇಂದ್ರ ಸರ್ಕಾರದ ಇಂತಹ ಜನವಿರೋಧಿ ನೀತಿಗಳಿಂದ ಹಲವು ರಾಜ್ಯಗಳು ಆರ್ಥಿಕ ಸಂಕಷ್ಟಕ್ಕೆ ಸಿಲುಕಿವೆ. ಆದ್ದರಿಂದ ಕಾಂಗ್ರೆಸ್ ಪಕ್ಷ ಹಾಗೂ ರಾಜ್ಯ ಸರ್ಕಾರ ಕೇಂದ್ರದ ನೀತಿಗಳ ವಿರುದ್ಧ ಹೋರಾಟ ನಡೆಸುತ್ತಿದೆ ಎಂದು ಸಿದ್ದರಾಮಯ್ಯ ಹೇಳಿದರು.

ವಿಬಿ ಜಿ ರಾಮ್ ಜಿ ಕಾಯ್ದೆಯನ್ನು ಸಂಪೂರ್ಣವಾಗಿ ರದ್ದುಪಡಿಸಿ, ನರೇಗಾ ಯೋಜನೆಯನ್ನು ಪುನರ್ ಸ್ಥಾಪಿಸುವವರೆಗೂ ಈ ಹೋರಾಟ ಮುಂದುವರಿಯಲಿದೆ. ಈ ಹೋರಾಟಕ್ಕೆ ರೈತರು, ಕಾರ್ಮಿಕರು, ಮಹಿಳೆಯರು ಸೇರಿದಂತೆ ಎಲ್ಲ ವರ್ಗದ ಜನರು ಕೈಜೋಡಿಸಲಿದ್ದಾರೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು.

**ವಿಬಿ ಜಿ ರಾಮ್ ಜಿ - ಆರ್‌ಎಸ್‌ಎಸ್ ಹುನ್ನಾರ:**ವಿಬಿ ಜಿ ರಾಮ್ ಜಿ ಕಾಯ್ದೆ ಬಡವರ ಹಕ್ಕನ್ನು ರಕ್ಷಿಸುವುದಿಲ್ಲ. ಈ ಕಾಯ್ದೆಯ ಹಿಂದೆ ಆರ್‌ಎಸ್‌ಎಸ್‌ನ ರಾಜಕೀಯ ಹುನ್ನಾರ ಅಡಗಿದೆ. ಬಡವರು ಬಲಯುತರಾಗದೆ, ಸದಾ ಸೇವಕರಾಗಿಯೇ ಇರಬೇಕೆಂಬುದು ಅವರ ಉದ್ದೇಶ ಎಂದು ಸಿದ್ದರಾಮಯ್ಯ ಆರೋಪಿಸಿದರು. ಸಮಾಜದಲ್ಲಿ ಅಸಮಾನತೆಯನ್ನು ಶಾಶ್ವತಗೊಳಿಸುವುದೇ ಆರ್‌ಎಸ್‌ಎಸ್‌ನ ಕಾರ್ಯಸೂತ್ರ ಎಂದು ಅವರು ಹೇಳಿದರು.

**ನರೇಗಾ ರದ್ದತಿ ಕುರಿತು ಬಿಜೆಪಿ ಚರ್ಚೆಗೆ ಅವಕಾಶ ನೀಡುತ್ತಿಲ್ಲ:**ಡಾ. ಬಿ.ಆರ್. ಅಂಬೇಡ್ಕರ್ ಹೇಳಿದಂತೆ ದೇಶದಲ್ಲಿ ಸಮಾನತೆ ಸ್ಥಾಪನೆಯಾಗಬೇಕಾದರೆ ಆರ್ಥಿಕ ಮತ್ತು ಸಾಮಾಜಿಕ ಸ್ವಾತಂತ್ರ್ಯ ಎಲ್ಲರಿಗೂ ದೊರಕಬೇಕು. ಮಹಾತ್ಮ ಗಾಂಧಿಯವರು ಗ್ರಾಮ ಸ್ವರಾಜ್ಯವನ್ನು ಪ್ರತಿಪಾದಿಸಿದ್ದರು. ಗೋಡ್ಸೆಯವರು ಗಾಂಧೀಜಿಯನ್ನು ಹತ್ಯೆ ಮಾಡಿದರೆ, ಬಿಜೆಪಿ ಸರ್ಕಾರ ನರೇಗಾ ಯೋಜನೆಯನ್ನು ರದ್ದು ಮಾಡುವ ಮೂಲಕ ಗಾಂಧೀಜಿಯನ್ನು ಮತ್ತೊಮ್ಮೆ ಹತ್ಯೆ ಮಾಡಿದಂತಾಗಿದೆ ಎಂದು ಸಿದ್ದರಾಮಯ್ಯ ತೀವ್ರವಾಗಿ ಟೀಕಿಸಿದರು.

ನರೇಗಾ ರದ್ದತಿ ಕುರಿತು ಚರ್ಚಿಸಲು ವಿಶೇಷ ಅಧಿವೇಶನ ಕರೆದರೂ ಬಿಜೆಪಿ ಚರ್ಚೆಗೆ ಅವಕಾಶ ನೀಡುತ್ತಿಲ್ಲ. ಆದರೂ ಈ ರದ್ದತಿಯ ವಿರುದ್ಧ ಸರ್ಕಾರ ಖಂಡಿತ ನಿರ್ಣಯ ಕೈಗೊಳ್ಳಲಿದೆ ಎಂದು ಅವರು ಭರವಸೆ ನೀಡಿದರು.

**ಮುಂದಿನ ಬಜೆಟ್‌ನಲ್ಲಿ ಗ್ರಾಮ ಪಂಚಾಯತಿಗಳಿಗೆ ಗಾಂಧೀಜಿ ಹೆಸರು:**ನರೇಗಾ ಪುನರ್ ಸ್ಥಾಪನೆ ಮತ್ತು ವಿಬಿ ಜಿ ರಾಮ್ ಜಿ ರದ್ದತಿಯನ್ನು ಒತ್ತಾಯಿಸಿ ರಾಜಭವನಕ್ಕೆ ಮನವಿ ಸಲ್ಲಿಸಲಾಗುವುದು. ರಾಜ್ಯದ ಎಲ್ಲ ಜಿಲ್ಲೆಗಳಲ್ಲೂ ಪಾದಯಾತ್ರೆ ಆರಂಭಿಸಲಾಗಿದ್ದು, ಈ ಹೋರಾಟಕ್ಕೆ ಪ್ರತಿಯೊಬ್ಬರೂ ಸಹಕರಿಸಬೇಕು ಎಂದು ಸಿದ್ದರಾಮಯ್ಯ ಮನವಿ ಮಾಡಿದರು.

ಮುಂದಿನ ಬಜೆಟ್‌ನಲ್ಲಿ ರಾಜ್ಯದ ಸುಮಾರು 6000 ಗ್ರಾಮ ಪಂಚಾಯತ್ ಕಚೇರಿಗಳಿಗೆ ಮಹಾತ್ಮ ಗಾಂಧಿಯವರ ಹೆಸರನ್ನು ಇಡುವ ಕುರಿತು ಘೋಷಣೆ ಮಾಡಲಾಗುವುದು ಎಂದು ಮುಖ್ಯಮಂತ್ರಿ ಈ ಸಂದರ್ಭದಲ್ಲಿ ತಿಳಿಸಿದರು.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.